ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 10 ನೇ ಮಾರ್ಚ್, 2020

ಬಿ.ಪಿ.ಎಲ್. ಕಾರ್ಡ್‌ದಾರರಿಗೆ ವಿತರಿಸುವ ಆಹಾರ ಧಾನ್ಯಗಳ ಕುರಿತು

ಶ್ರೀ ಎಸ್. ಎಲ್. ಭೋಜೇಗೌಡ(ಶಿಕ್ಷಕರ ಕ್ಷೇತ್ರ):-

486 (585) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬಿ.ಪಿ.ಎಲ್. ಕಾರ್ಡ್ ಹೊಂದಿದವರಿಗೆ ತಿಂಗಳಿಗೆ ವಿತರಿಸುವ ಆಹಾರ ಧಾನ್ಯಗಳ ಪ್ರಮಾಣವೆಷ್ಟು; ಕಡಿಮೆ ಪ್ರಮಾಣದಲ್ಲಿ ವಿತರಣೆಯಾಗಿರುವ ಉದಾಹರಣೆ ಇದೆಯೇ;

(ಆ) ಹಾಗಿದ್ದಲ್ಲಿ, ಸರ್ಕಾರದಿಂದ ಆಹಾರ ಧಾನ್ಯಗಳ ವಿತರಣೆಗೆ ಒದಗಿಸುವ ಅನುದಾನವೆಷ್ಟು; ಅನುದಾನವು ಸೂಕ್ತ ರೀತಿಯಲ್ಲಿ ಬಳಕೆಯಾಗುತ್ತಿದೆಯೇ; ಮತ್ತು ಅನುದಾನಕ್ಕೆ ತಕ್ಕಂತೆ ಆಹಾರ ವಿತರಣೆಯಾಗುತ್ತಿದೆಯೇ;

(ಇ) ಅಂಗನವಾಡಿ ಮತ್ತು ಶಾಲಾ ಮಕ್ಕಳಿಗೆ ಒದಗಿಸಲಾಗುವ ಆಹಾರ ವಿತರಣೆಯು ಗುಣಮಟ್ಟದಿಂದ ಕೂಡಿದೆಯೇ;

(ಈ) ಬಿ.ಪಿ.ಎಲ್. ಕಾರ್ಡ್ ವಿತರಣೆಯು ಕ್ರಮವಾಗಿ ಸರಿಯಾದ ಫಲಾನುಭವಿಗಳಿಗೆ ತಲುಪುತ್ತಿದೆಯೇ; ಹಾಗಿದ್ದಲ್ಲಿ, ಇದರಲ್ಲಿ ಅಕ್ರಮ ಎಸಗುತ್ತಿರುವವರ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು?